ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ವಿಧಾನಸಭೆ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ ದಿನಾಂಕ : DATE 16/3/21

# ಮೇಲ್ವರ್ಗಕ್ಕೆ ಶೀಘ್ರ ಶೇ.10 ಮೀಸಲು: ಬೊಮ್ಮಾಯಿ

16/3/21

## ಕಲಾಪ ಮುಗಿಯುವುದರೊಳಗೆ ಸ್ಪಷ್ಟ ಆದೇಶ

ವಿಧಾನಸಭೆ: ಆರ್ಥಿಕವಾಗಿ ಹಿಂದುಳಿದ ಮೇಲ್ವರ್ಗದವರಿಗೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ಶೇ.10 ರಷ್ಟು ಮೀಸಲಾತಿ ಕಲ್ಪಿಸಲು ಗೊಂದಲಗಳು ಉಂಟಾಗದಂತೆ



ಸೂಕ್ತ ಸಿದ್ಧತೆಗಳೊಂದಿಗೆ ಸದನ ಮುಗಿಯುವುದರೊಳಗೆ ಆದೇಶಿಸಲಾಗುವುದು ಎಂದು ಗೃಹ ಸಚಿವ ಬಸವರಾಜ ಬೊಮ್ಮಾಯಿ ಭರವಸೆ ನೀಡಿದ್ದಾರೆ. ಸೋಮವಾರದ ಬಿಜೆಪಿಯ ಡಿ. ವೇದವ್ಯಾಸ ಕಾಮತ್ ಗಮನ ಸೆಳೆಯುವ ಸೂಚನೆಯಡಿ ಪ್ರಸ್ತಾಪಿಸಿದ ವಿಚಾರದ ಬಗ್ಗೆ ವಿಸ್ತೃತ ಚರ್ಚೆ ನಡೆಯಿತು. ಮೊದಲಿಗೆ ಮಾತನಾಡಿದ ವೇದವ್ಯಾಸ ಕಾಮತ್, ಕೇಂದ್ರ ಸರ್ಕಾರ ಆರ್ಥಿಕವಾಗಿ ಹಿಂದುಳಿದ ಮೇಲ್ವರ್ಗದವರಿಗೆಶೇ.10ರಷ್ಟು ಮೀಸಲಾತಿಕಲ್ಪಿಸಿದೆ. ಆದರೆಅರ್ಹ ಫಲಾನುಭವಿಗಳಿಗೆ ಸೌಲಭ್ಯ ಸಿಗದಂತಾಗಿದೆ ಎಂದರು. ಇದಕ್ಕೆ ಪ್ರತಿಕ್ರಿಯಿಸಿದ ಗೃಹ ಸಚಿವ ಬೊಮ್ಮಾಯಿ ಶೀಘ್ರವೇ ಆದೇಶ ಹೊರಡಿಸುವುದಾಗಿ ಹೇಳಿದರು.